ಅ) ಶಿವಮೊಗ್ಗ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳ ಆಸ್ಪತ್ರೆಗಳಲ್ಲಿ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಕೊರತೆಯನ್ನು ನಿವಾರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಇ) ರಾಜ್ಯದಲ್ಲಿ ಕಳೆದ ವರ್ಷ ಮಂಜೂರಾದ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ತಿಳಿಸುವಿರಾ)?

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ

ಆ) 573 ವೈದ್ಯರನ್ನು ನೇಮಕ ಮಾಡುವ ಬಗ್ಗೆ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಈಗಾಗಲೇ ಪ್ರಕಟಿಸಲಾಗಿದ್ದು, ನೇಮಕ ಮಾಡುವ ಕ್ರಮ ಕೈಗೊಳ್ಳಲಾಗಿದೆ. ಈ ಸಂದರ್ಭದಲ್ಲಿ ಸದರಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಇ) ಮಂಜೂರಾಗಿಲ್ಲ

ರಾಜ್ಯದಲ್ಲಿರುವ ಖಾಸಗಿ ನರ್ಸಿಂಗ್ ಹೋಂಗಳು

1525 (1870) ಶ್ರೀ ಚಂದ್ರಶೇಖರಪ್ಪ. ಹೆಚ್.ಎಂ (ಶಿವಮೊಗ್ಗ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ

ಅ) ರಾಜ್ಯದಲ್ಲಿರುವ ಖಾಸಗಿ ನರ್ಸಿಂಗ್ ಹೋಂಗಳಿಂದ ಸರ್ಕಾರಕ್ಕೆ ಆದಾಯವಿದೆಯೇ?

ಆ) ಹಾಗಿದ್ದಲ್ಲಿ ಪ್ರತಿ ವರ್ಷ ಬರುವ ಆದಾಯ ಎಷ್ಟು?

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಪ್ರಾಂಶುಪಾಲರು ಮತ್ತು ವಿಭಾಗಾಧಿಕಾರಿಗಳ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡದಿರುವುದು

1526 (1719) ಶ್ರೀ ಎ.ಎಸ್. ಗುರುಪಾದಸ್ವಾಮಿ (ಚಾಮುಂಡೇಶ್ವರಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಪ್ರಾಂಶುಪಾಲರು ಮತ್ತು ವಿಭಾಗಾಧಿಕಾರಿಗಳ ಬ್ಯಾಕ್‌ಲಾಗ್ ಹುದ್ದೆಗಳ ಮುಂಬಡ್ತಿಗೆ ಸಂಬಂಧಪಟ್ಟ ಕಡತಗಳು ಸರ್ಕಾರದ ಪರಿಶೀಲನೆಯಲ್ಲಿರುವುದು ನಿಜವೆ?

ಆ) ಹಾಗಿದ್ದಲ್ಲಿ, ಆ ಕಡತಗಳು ಸರ್ಕಾರದ ಯಾವ ಹಂತದಲ್ಲಿ ಪರಿಶೀಲನೆಯಲ್ಲಿದೆ?

ಇ) ಈ ಕಡತಗಳನ್ನು ಸರ್ಕಾರ ಶೀಘ್ರವಾಗಿ ಪರಿಶೀಲಿಸಿ ಕ್ರಮ ಕೈಗೊಂಡು ಮುಂಬಡ್ತಿ ಆದೇಶ ನೀಡಲು ಪ್ರಯತ್ನಿಸಿದೆಯೆ?